# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ:- 2022-23 ನೇ ಸಾಲಿನಲ್ಲಿ ರಾಜ್ಯದ 8 ಮೀನುಗಾರಿಕೆ ಬಂದರುಗಳಲ್ಲಿ ಮೀನುಗಾರಿಕೆ ದೋಣಿಗಳು ಸುಗಮವಾಗಿ ಮತ್ತು ವೇಗವಾಗಿ ಚಲಿಸಲು ಅನುಕೂಲವಾಗಿಸಲು ನ್ಯಾವಿಗೇಷನ್ ಚಾನಲ್ ಗಳಲ್ಲಿ ಹಂತ ಹಂತವಾಗಿ ಹೂಳೆತ್ತುವ ಕಾಮಗಾರಿಗೆ ಸಂಬಂಧಿಸಿದ ಯೋಜನೆಗೆ ಆಡಳಿತಾತ್ಮಕ ಅನುಮೋದನೆ ನೀಡುವ ಬಗ್ಗೆ.

ಓದಲಾಗಿದೆ:- ಮೀನುಗಾರಿಕೆ ನಿರ್ದೇಶಕರ ಏಕ ಕಡತ ಪತ್ರ ಸಂಖ್ಯೆ: DoF-TECHO-FYP1/13/2022, ದಿನಾಂಕ: 09-03-2022.

- 8 APR 2022
F-YP

******

**ಪ್ರಸ್ತಾವನೆ:**

2022-23 ನೇ ಸಾಲಿನ ಆಯವ್ಯಯ ಭಾಷಣದ ಕಂಡಿಕೆ-64ರಲ್ಲಿ ರಾಜ್ಯದ 8 ಮೀನುಗಾರಿಕೆ ಬಂದರುಗಳಲ್ಲಿ ಮೀನುಗಾರಿಕಾ ದೋಣಿಗಳು ಸುಗಮವಾಗಿ ಮತ್ತು ವೇಗವಾಗಿ ಚಲಿಸಲು ಅನುಕೂಲವಾಗಿಸಲು ನ್ಯಾವಿಗೇಷನ್ ಚಾನಲ್ ಗಳಲ್ಲಿ ಹಂತ ಹಂತವಾಗಿ ಹೂಳೆತ್ತಲಾಗುವುದು (Dredging) ಎಂದು ಘೋಷಿಸಲಾಗಿದೆ.

ಮೇಲೆ ಓದಲಾದ ನಿರ್ದೇಶಕರು, ಮೀನುಗಾರಿಕೆ ಇಲಾಖೆ ಇವರ ಏಕ ಕಡತ ಪತ್ರದಲ್ಲಿ, ಕರ್ನಾಟಕ ರಾಜ್ಯವು 320 ಕಿಮೀ ಉದ್ದದ ಕರಾವಳಿ ತೀರವನ್ನು ಹೊಂದಿರುತ್ತದೆಂದು, ಪ್ರಸ್ತುತ ರಾಜ್ಯದಲ್ಲಿ 9 ಮೀನುಗಾರಿಕೆ ಬಂದರುಗಳು ಹಾಗೂ 25 ಮೀನುಗಾರಿಕಾ ಇಳಿದಾಣ ಕೇಂದ್ರಗಳು ಕಾರ್ಯನಿರ್ವಹಿಸುತ್ತಿರುತ್ತವೆ. ಕಡಲ ಮೀನುಗಾರಿಕೆ ಪ್ರೋತ್ಸಾಹಿಸಲು ಮೂಲಭೂತ ಸೌಕರ್ಯಗಳಾದ ಮೀನುಗಾರಿಕೆ ಬಂದರುಗಳು ಮತ್ತು ಇಳಿದಾಣ ಕೇಂದ್ರಗಳನ್ನು ನಿರ್ಮಿಸುವ ಹೊಣೆಗಾರಿಕೆ ರಾಜ್ಯ ಸರ್ಕಾರದಾಗಿರುತ್ತದೆ. ಈ ನಿಟ್ಟಿನಲ್ಲಿ ಮೀನುಗಾರಿಕೆ ಬಂದರು ಮತ್ತು ಇಳಿದಾಣ ಕೇಂದ್ರಗಳ ನಿರ್ಮಾಣ ಮತ್ತು ನವೀಕರಣ ಅಗತ್ಯತೆಗೆ ಅನುಗುಣವಾಗಿ ಕೈಗೊಳ್ಳಲಾಗುತ್ತಿರುತ್ತದೆ ಎಂದು ತಿಳಿಸಿರುತ್ತಾರೆ.

ಮೀನುಗಾರಿಕೆ ಬಂದರು ಮತ್ತು ಇಳಿದಾಣ ಕೇಂದ್ರಗಳಲ್ಲಿ ಹಲವಾರು ವರ್ಷಗಳಿಂದ ವಿವಿಧ ಮಾನವ ಜನ್ಯ ಮತ್ತು ನೈಸರ್ಗಿಕ ಕಾರಣಗಳಿಂದ ಹೂಳಿನ ಸಮಸ್ಯೆಯನ್ನು ಎದುರಿಸುತ್ತಿವೆ. ಇದರಿಂದಾಗಿ ಮೀನುಗಾರಿಕೆ ದೋಣಿಗಳ ಸುರಕ್ಷಿತ ಮತ್ತು ಸುಗಮ ಸಂಚಾರಕ್ಕೆ ಅಡಚಣೆ ಉಂಟಾಗುತ್ತಿದೆ. ಇದಲ್ಲದೆ ದೋಣಿಗಳ ಸಂಖ್ಯೆಯಲ್ಲಿ ಹೆಚ್ಚಳವಾಗಿರುವುದರಿಂದ ಮೀನುಗಾರಿಕೆ ದೋಣಿಗಳ ಸುರಕ್ಷಿತ ಇಳಿಸುವಿಕೆ ಮತ್ತು ತಂಗುವಿಕೆಯಲ್ಲಿ ಇನ್ನು ಹೆಚ್ಚಿನ ತೊಂದರೆಗಳನ್ನು ಅನುಭವಿಸಲಾಗುತ್ತಿದೆ. ಕೆಲವೊಮ್ಮೆ, ಬಾರ್-ಮೌತ್ ಮತ್ತು ನ್ಯಾವಿಗೇಷನಲ್ ಚಾನೆಲ್ಗಳು ಹೂಳು ತುಂಬಿ ದೋಣಿಗಳ ಚಲನೆಯ ಮೇಲೆ ಪರಿಣಾಮ

-2-

ಬೀರುತ್ತಿದ್ದು, ಇದು ಮೀನುಗಾರಿಕಾ ದೋಣಿಗಳ ಅಪಘಾತ, ಮೀನುಗಾರರ ಸಾವು ಮತ್ತು ದೋಣಿಗಳಿಗೆ ಹಾನಿಯಾಗುತ್ತದೆಂದು, ಆದ್ಯತೆಯ ಆಧಾರದ ಮೇಲೆ ಅನೇಕ ಬಂದರುಗಳಲ್ಲಿ ತಕ್ಷಣದ ಹೂಳೆತ್ತುವ ಅಗತ್ಯವಿದೆ ಎಂದು ತಿಳಿಸಿ, ಹೂಳೆತ್ತುವ ಕಾಮಗಾರಿಯನ್ನು ರೂ.25.00 ಕೋಟಿ ಅಂದಾಜು ವೆಚ್ಚದಲ್ಲಿ ಕೆಳಕಂಡ 8 ಬಂದರುಗಳಲ್ಲಿ ಕೈಗೊಳ್ಳಲು ತಾತ್ವಿಕ ಆಡಳಿತಾತ್ಮಕ ಅನುಮೋದನೆ ನೀಡಲು ಕೋರಿರುತ್ತಾರೆ.

| ಕ್ರ. ಸಂ | ಜಿಲ್ಲೆ | ಬಂದರುಗಳ ವಿವರ |
|---|---|---|
| 1 | ದಕ್ಷಿಣ ಕನ್ನಡ | ಮಂಗಳೂರು |
| 2 | ಉಡುಪಿ | ಮಲ್ಪೆ |
| 3 | | ಗಂಗೊಳ್ಳಿ |
| 4 | ಉತ್ತರ ಕನ್ನಡ | ತದಡಿ |
| 5 | | ಭಟ್ಕಳ |
| 6 | | ಹೊನ್ನಾವರ |
| 7 | | ಕಾರವಾರ |
| 8 | | ಆಮದಳ್ಳಿ |

ಮೀನುಗಾರಿಕೆ ನಿರ್ದೇಶಕರ ಪ್ರಸ್ತಾವನೆಯನ್ನು ಕೂಲಂಕಷವಾಗಿ ಪರಿಶೀಲಿಸಿ, ಕೆಳಕಂಡಂತೆ ಆದೇಶಿಸಿದೆ.

**ಆದೇಶ ಸಂಖ್ಯೆ: ಪಸಂಮೀ ಇ-100 ಮೀಇಯೋ 2022, ಬೆಂಗಳೂರು ದಿನಾಂಕ: 07-04-2022**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, 2022-23 ನೇ ಸಾಲಿನ ಆಯವ್ಯಯ ಭಾಷಣದ ಕಂಡಿಕೆ-64 ರಂತೆ, ರಾಜ್ಯದ 8 ಮೀನುಗಾರಿಕೆ ಬಂದರುಗಳಲ್ಲಿ ಮೀನುಗಾರಿಕಾ ದೋಣಿಗಳು ಸುಗಮವಾಗಿ ಮತ್ತು ವೇಗವಾಗಿ ಚಲಿಸಲು ಅನುಕೂಲವಾಗಿಸಲು ನ್ಯಾವಿಗೇಷನ್ ಚಾನಲ್ ಗಳಲ್ಲಿ ಹಂತ ಹಂತವಾಗಿ ಹೂಳೆತ್ತುವ ಕಾಮಗಾರಿಯನ್ನು ರೂ.2000.00 ಲಕ್ಷ (ಎರಡು ಸಾವಿರ ಲಕ್ಷ ರೂಪಾಯಿಗಳು ಮಾತ್ರ)ಗಳ ಅಂದಾಜು ವೆಚ್ಚದಲ್ಲಿ Karnataka Martime Board ಮೂಲಕ ಅನುಷ್ಠಾನಗೊಳಿಸಲು ಆಡಳಿತಾತ್ಮಕ ಅನುಮೋದನೆ ನೀಡಿ ಆದೇಶಿಸಲಾಗಿದೆ.

ಸದರಿ ವೆಚ್ಚವನ್ನು ಲೆಕ್ಕ ಶೀರ್ಷಿಕೆ 4405-ಮೀನುಗಾರಿಕೆ ಮೇಲಿನ ಬಂಡವಾಳ ವೆಚ್ಚ-00-104-ಮೀನುಗಾರಿಕೆ ಬಂದರುಗಳು ಮತ್ತು ಇಳಿದಾಣ ಸೌಕರ್ಯಗಳು-0-02 ಮೀನುಗಾರಿಕೆ ಬಂದರು ಮತ್ತು ಇಳಿದಾಣ ಕೇಂದ್ರಗಳ ನವೀಕರಣ-386-ನಿರ್ಮಾಣ ರಡಿ 2022-23ನೇ ಸಾಲಿನಲ್ಲಿ ಒದಗಿಸಿರುವ ಅನುದಾನದಿಂದ ಭರಿಸತಕ್ಕದ್ದು.

ಈ ಆದೇಶವನ್ನು ಯೋಜನಾ ಇಲಾಖೆಯ ಟಿಪ್ಪಣಿ ಸಂಖ್ಯೆ: ಪಿಡಿಎಸ್-ಪಿಎಫ್‌ಓ/10/2022, ದಿನಾಂಕ: 31-03-2022 ರಲ್ಲಿ ಹಾಗೂ ಆರ್ಥಿಕ ಇಲಾಖೆಯ ಅನಧಿಕೃತ ಟಿಪ್ಪಣಿ ಸಂಖ್ಯೆ: ಆಇ/53/ವೆಚ್ಚ-4/2022, ದಿನಾಂಕ: 05-04-2022 ರಲ್ಲಿ ನೀಡಿರುವ ಸಹಮತಿ ಮೇರೆಗೆ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

Kamakshi U.A. 7/4/2022
(ಕಾಮಾಕ್ಷಿ ಯು.ಎ.)
ಸರ್ಕಾರದ ಅಧೀನ ಕಾರ್ಯದರ್ಶಿ,
ಪಶುಸಂಗೋಪನೆ ಮತ್ತು ಮೀನುಗಾರಿಕೆ ಇಲಾಖೆ
(ಮೀನುಗಾರಿಕೆ)

ಇವರಿಗೆ

1) ಪ್ರಧಾನ ಮಹಾಲೇಖಪಾಲರು (ಜಿ&ಎಸ್‌ಎಸ್‌ಎ)(ಇ&ಆರ್‌ಎಸ್‌ಎ), ಕರ್ನಾಟಕ, ಹೊಸ ಕಟ್ಟಡ, "ಆಡಿಟ್ ಭವನ", ಬೆಂಗಳೂರು.
2) ಪ್ರಧಾನ ಮಹಾಲೇಖಪಾಲರು (ಎ&ಇ), ಕರ್ನಾಟಕ, ಪಾರ್ಕ್‌ಹೌಸ್ ರಸ್ತೆ, ಬೆಂಗಳೂರು.
3) ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಮೂಲಸೌಲಭ್ಯ, ಬಂದರು ಮತ್ತು ಒಳನಾಡು ಜಲಸಾರಿಗೆ ಇಲಾಖೆ, ವಿಕಾಸಸೌಧ, ಬೆಂಗಳೂರು.
4) ಮೀನುಗಾರಿಕೆ ನಿರ್ದೇಶಕರು, ಬೆಂಗಳೂರು.
5) ನಿರ್ದೇಶಕರು, ಬಂದರು ಮತ್ತು ಒಳನಾಡು ಜಲಸಾರಿಗೆ ಇಲಾಖೆ, ಬೈತಖೋಲ, ಕಾರವಾರ.
6) ನಿರ್ದೇಶಕರು (ಪಿಎಫ್‌ಡಿ), ಯೋಜನೆ, ಕಾರ್ಯಕ್ರಮ ಸಂಯೋಜನೆ ಮತ್ತು ಸಾಂಖ್ಯಿಕ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
7) ಜಂಟಿ ನಿರ್ದೇಶಕರು, ಗಣಕ ಜಾಲ ನಿರ್ವಹಣಾ ಕೇಂದ್ರ, ಖನಿಜ ಭವನ, ರೇಸ್‌ಕೋರ್ಸ್ ರಸ್ತೆ, ಬೆಂಗಳೂರು.
8) ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, Karnataka Martime Board, ಬೆಂಗಳೂರು.
9) ಸಂಬಂಧಪಟ್ಟ ಮೀನುಗಾರಿಕೆ ಜಂಟಿ ನಿರ್ದೇಶಕರುಗಳಿಗೆ – ಮೀನುಗಾರಿಕೆ ನಿರ್ದೇಶಕರ ಮುಖಾಂತರ.
10) ಆಂತರಿಕ ಆರ್ಥಿಕ ಸಲಹೆಗಾರರು, ಕೃ.ತೋ. ಮತ್ತು ಪ.ಸಂ.ಮೀ. ಇಲಾಖೆ.
11) ಸರ್ಕಾರದ ಅಧೀನ ಕಾರ್ಯದರ್ಶಿ, ಆರ್ಥಿಕ ಇಲಾಖೆ (ವೆಚ್ಚ-4), ವಿಧಾನಸೌಧ, ಬೆಂಗಳೂರು.
12) ಖಜಾನಾಧಿಕಾರಿ, ರಾಜ್ಯ ಹುಜೂರ್ ಖಜಾನೆ, ಬೆಂಗಳೂರು.
13) ಕಂಟ್ರೋಲ್ ರೂಮ್-ಕಂ-24x7 ಹೆಲ್ಪ್ ಲೈನ್ (ಸಹಾಯವಾಣಿ), ಮೀನುಗಾರಿಕೆ ಇಲಾಖೆ.
14) ಶಾಖಾ ರಕ್ಷಾ ಕಡತ / ಹೆಚ್ಚಿನ ಪ್ರತಿಗಳು / ಸಮನ್ವಯ-ಕಂಪೆಂಡಿಯಂ.

ಪ್ರತಿಯನ್ನು

1) ಮಾನ್ಯ ಮೀನುಗಾರಿಕೆ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರ ಆಪ್ತ ಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು.
2) ಸರ್ಕಾರದ ಕಾರ್ಯದರ್ಶಿಗಳು / ಜಂಟಿ ಕಾರ್ಯದರ್ಶಿಗಳ ಆಪ್ತ ಕಾರ್ಯದರ್ಶಿ / ಆಪ್ತ ಸಹಾಯಕರು, ಪಸಂಮೀ ಇಲಾಖೆ, ವಿಕಾಸಸೌಧ, ಬೆಂಗಳೂರು.